Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

25.02.2025 18.40 hrs

<><*<><>*><>

ಮುಖ್ಯಾಂಶಗಳು

- ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಿಗೆ ಕೇಂದ್ರ ಅನುದಾನ ನೀಡುವಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ
- ಬೆಂಗಳೂರಿನಲ್ಲಿ ನಾಳೆಯಿಂದ ಮೂರು ದಿನ ಪ್ರವಾಸೋದ್ಯಮ ಸಮ್ಮೇಳನ ; ರಾಜ್ಯದ ಪ್ರವಾಸೋದ್ಯಮ ಕ್ಷೇತ್ರಗಳ ಅನಾವರಣ
- ಕರ್ನಾಟಕ-ಮಹಾರಾಷ್ಟ್ರ ನಡುವೆ ಬಸ್ ಸಂಚಾರ ಪುನರಾರಂಭ ಹಿನ್ನೆಲೆ ; ಬೆಳಗಾವಿ, ಕೊಲ್ಲಾಪುರ ಜಿಲ್ಲಾಧಿಕಾರಿಗಳ ಸಭೆ
- ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ಯಾಂಡ್ ಬಜಾರ್ ಆಪ್ ವ್ಯವಸ್ಥೆ ಜಾರಿಗೆ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಸೂಚನೆ
- ದೇಶಾದ್ಯಂತ ನಾಳೆ ಶಿವರಾತ್ರಿ ಆಚರಣೆ ; ಗೋಕರ್ಣ, ಧರ್ಮಸ್ಥಳ ಸೇರಿದಂತೆ ಶಿವ ದೇವಾಲಯಗಳಲ್ಲಿ ವಿಶೇಷ ಪೂಜೆ

<><*<><>*><>

ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಿಗೆ ಅನುಮತಿ ಹಾಗೂ ಅನುದಾನ ನೀಡುವಂತೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಸಲ್ಲಿಸಿದ್ದಾರೆ. ನವದೆಹಲಿಯಲ್ಲಿಂದು ನೆನಗುದಿಗೆ ಬಿದ್ದಿರುವ ರಾಜ್ಯದ ಯೋಜನೆಗಳಾದ ಅನುದಾನ ನೀಡುವಂತೆ ಹಾಗೂ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳನ್ನು ತುಂಗಭದ್ರ ಎಡದಂಡೆ ಕಾಲುವೆ, ಘಟಪ್ರಭ ಪ್ರಮುಖ ಕಾಲುವೆ, ಕೃಷ್ಣ ಮೇಲ್ದಂಡೆ ಯೋಜನೆಯ ಇಂಡಿ ಕಾಲುವೆ, ಮಲಪ್ರಭ ಕಾಲುವೆಗಳ ವಿಸ್ತರಣೆ ನವೀಕರಣ, ಆಧುನೀಕರಣಗೊಳಿಸಲು ಅನುದಾನ ಬಿಡುಗಡೆ ಮಾಡುವಂತೆ ಒತ್ತಾಯಿಸಿದ್ದಾರೆ. ಮನವಿಯಲ್ಲಿ ಭದ್ರ ಎಡದಂಡೆ ಕಾಲುವೆಯ ವಿಸ್ತರಣೆ ಮಾಡಿದರೆ ಕಾಲುವೆಯ ಕೊನೆ ಭಾಗದ ರೈತರಿಗೂ ನೀರು ಹಂಚಿಕೆಯಾಗಲಿದೆ. ಜೊತೆಗೆ ೬೭ ಸಾವಿರದ ೪೦೦ ಹೆಕ್ಟೇರ್ ಪ್ರದೇಶದ ರೈತರಿಗೆ ನೆರವಾಗಲಿದೆ. ಈ ಯೋಜನೆಗೆ ಒಂದು ಸಾವಿರದ ೪೪೪ ಕೋಟಿ ೪೨ ಲಕ್ಷ ರೂಪಾಯಿಗಳ ಅನುದಾನ ಅಗತ್ಯವಿದೆ ಎಂದು ತಿಳಿಸಲಾಗಿದೆ. ಘಟಪ್ರಭ, ಬಲದಂಡೆ ಪ್ರಮುಖ ಕಾಲುವೆಯ ವಿಸ್ತರಣೆ ಮಾಡಬೇಕು. ಸೋಂತಿ ಏತ ನೀರಾವರಿ ಯೋಜನೆಯು ಸೋಂತಿ ಬ್ಯಾರೆಜ್‌ನಿಂದ ನೀರನ್ನು ಎತ್ತಿ ಕಾಲುವೆಗಳ ಮೂಲಕ ಬರಪೀಡಿತ

ಚಿತ್ತಾಪುರ, ಯಾದಗಿರಿ ತಾಲೂಕಿನ ೧೬ ಸಾವಿರ ಹೆಕ್ಟೇರ್ ಕೃಷಿ ಭೂಮಿಗೆ ೪ ಟಿಎಂಸಿ ನೀರನ್ನು ಒದಗಿಸುವ ಯೋಜನೆಯಾಗಿದ್ದು, ಅನುದಾನ ನೀಡುವಂತೆ ಮನವಿಯಲ್ಲಿ ತಿಳಿಸಿದ್ದಾರೆ.

<><*<><>*><>

ಪಿಎಂಕೆಎಸ್‌ವೈ ಅಡಿಯಲ್ಲಿ ರಾಜ್ಯದಿಂದ ಸಲ್ಲಿಸಲಾಗಿರುವ ಸುಮಾರು ೩ ಸಾವಿರದ ೭೭ ಕೋಟಿ ರೂಪಾಯಿಗಳ ವಿವಿಧ ಪ್ರಸ್ತಾವನೆಗಳನ್ನು ಅನುಮೋದಿಸಿ, ಹೊಸ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಅನುದಾನ ನೀಡಬೇಕು ಎಂದು ಕೇಂದ್ರ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್ ಎಸ್ ಬೋಸರಾಜು ತಿಳಿಸಿದ್ದಾರೆ. ವಿಶಾಕಪಟ್ಟಣಂದಿಂದ ಮೆಹಬೂಬ್ ನಗರದವರೆಗೆ ಬರುವ ಎಕ್ಸ್‌ಪ್ರೆಸ್ ರೈಲನ್ನು ರಾಯಚೂರುವರೆಗೆ ವಿಸ್ತರಿಸಬೇಕು. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಅಡಿಯಲ್ಲಿ ಸಲ್ಲಿಸಿದ ಪ್ರಸ್ತಾವನೆಗಳನ್ನು ಅನುಮೋದಿಸಿ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕು. ರಾಜ್ಯದ ಹಲವಾರು ಜಿಲ್ಲೆಗಳಿಗೆ ಅಗತ್ಯವಿರುವಂತಹ ಕಾಮಗಾರಿಗಳನ್ನು ಕೈಗೊಳ್ಳಲು ೪೦%ರಾಜ್ಯ ಸರ್ಕಾರ ೬೦% ಕೇಂದ್ರದ ಅನುಪಾತಲ್ಲಿ ಅನುದಾನ ಒದಗಿಸುವಂತೆ ಮನವಿ ಮಾಡಿದರು.

<><*<><>*><>

ರಾಜ್ಯದ ಪ್ರವಾಸೋದ್ಯಮವನ್ನು ವಿಶ್ವಕ್ಕೆ ಪರಿಚಯಿಸುವ ಉದ್ದೇಶದಿಂದ ನಾಳೆಯಿಂದ ಇದೇ ೨೮ರವರೆಗೆ ಮೂರು ದಿನಗಳ ಕಾಲ ಕರ್ನಾಟಕ ಇಂಟರ್‌ನ್ಯಾಷನಲ್ ಟ್ರಾವೆಲ್ ಎಕ್ಸ್‌ಪೋ - ಕೈಟ್ - ೨೦೨೫ ಬೆಂಗಳೂರಿನಲ್ಲಿ ನಡೆಯಲಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾವೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದು, ಕೇಂದ್ರ ಪ್ರವಾಸೋದ್ಯಮ ಇಲಾಖೆಯು ಪಾಲ್ಗೊಳ್ಳಲಿದೆ ಎಂದು ಮಾಹಿತಿ ನೀಡಿದ್ದಾರೆ. ಪ್ರತಿವರ್ಷ ರಾಜ್ಯಕ್ಕೆ ಒಂದು ಕೋಟಿ ೨೫ ಲಕ್ಷಕ್ಕೂ ಅಧಿಕ ಪ್ರವಾಸಿಗರು ಆಗಮಿಸುತ್ತಿದ್ದಾರೆ. ರಾಜ್ಯದಲ್ಲಿ ೨೫ ಸಾವಿರಕ್ಕೂ ಹೆಚ್ಚು ಅಸುರಕ್ಷಿತ ಸ್ಮಾರಕಗಳಿವೆ. ಇದರಲ್ಲಿ ೮೦೦ ಕ್ಕೂ ಹೆಚ್ಚು ಸ್ಮಾರಕಗಳನ್ನು ರಕ್ಷಣೆ ಮಾಡಲಾಗಿದೆ. ಇಂದಿನ ಪೀಳಿಗೆಗೆ ಇವುಗಳ ಮಹತ್ವವನ್ನು ತಿಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಎಚ್.ಕೆ. ಪಾಟೀಲ್

<><*<><>*><>

ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯಗಳ ನಡುವಿನ ಬಸ್ ಸಂಚಾರ ಪುನರಾರಂಭ ಕುರಿತು ಬೆಳಗಾವಿ ಮತ್ತು ಕೊಲ್ಹಾಪುರ ಜಿಲ್ಲಾಧಿಕಾರಿಗಳ ಹಾಗೂ ಪೋಲಿಸ್ ವರಿಷ್ಠಾಧಿಕಾರಿಗಳು ವೀಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು. ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮಾತನಾಡಿ, ಮಹಾರಾಷ್ಟ್ರ ಗಡಿ ಪ್ರದೇಶಗಳವರೆಗೆ ರಾಜ್ಯ ಸಾರಿಗೆ ಸಂಸ್ಥೆಯ ಬಸ್‌ಗಳು ಸಂಚರಿಸುತ್ತಿದ್ದು, ಅಲ್ಲಿಂದ ತಮ್ಮ ರಾಜ್ಯ ಸಾರಿಗೆ ಬಸ್‌ಗಳ ಮೂಲಕ ಪ್ರಯಾಣಿಕರನ್ನು ಕರೆದೊಯ್ಯುವಂತೆ  ಕೋಲ್ಹಾಪುರ ಜಿಲ್ಲಾಧಿಕಾರಿಗಳಿಗೆ ತಿಳಿಸಿದ್ದಾರೆ. ಉಭಯ ರಾಜ್ಯಗಳ ಸಾರಿಗೆ ಬಸ್‌ಗಳ ಮೇಲೆ ದಾಳಿ ಮಾಡುವವರ ಮೇಲೆ ಪ್ರಕರಣ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಬೇಕು. ಕರ್ನಾಟಕ ರಾಜ್ಯದಲ್ಲಿ ಈಗಾಗಲೇ ಬಸ್‌ಗಳ ಮೇಲೆ ದಾಳಿ ಮಾಡಿದವರ ಮೇಲೆ ಪ್ರಕರಣವನ್ನು ದಾಖಲಿಸಲಾಗಿರುತ್ತದೆ ಎಂದು ಮಾಹಿತಿ ನೀಡಿದ್ದಾರೆ. ಉಭಯ ರಾಜ್ಯಗಳ ನಡುವೆ ಸುಗಮ ಬಸ್ ಕಾರ್ಯಾಚರಣೆಗೆ ಸಂಬಂಧಿಸಿದಂತೆ ಎರಡು ದಿನಗಳೊಳಗಾಗಿ ಮಾರ್ಗಸೂಚಿಗಳನ್ನು ತಯಾರಿಸಲಾಗುವುದು ಎಂದು ತಿಳಿಸಿದ್ದಾರೆ. ಸೊಲ್ಲಾಪುರ ಹಾಗೂ ಸಾಂಗ್ಲಿ ಜಿಲ್ಲೆಗಳ ಪೋಲಿಸ್ ವರಿಷ್ಠಾಧಿಕಾರಗಳೊಂದಿಗೆ ಚರ್ಚಿಸಿ ರಾಜ್ಯ ಸಾರಿಗೆ ಸಂಸ್ಥೆಯ ಬಸ್ ಗಳಿಗೆ ಸೂಕ್ತ ಬಂದೋಬಸ್ತ್ ನೀಡುವಂತೆ ತಿಳಿಸಿದ್ದಾರೆ.

<><*<><>*><>

ರಾಜ್ಯದ ಗಡಿಯಲ್ಲಿ ಭಾಷಾ ವೈಷಮ್ಯದ ಹಿನ್ನಲೆಯಲ್ಲಿ ಕನ್ನಡಿಗರ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಕೊಡಗಿನ ಕುಶಾಲನಗರದಲ್ಲಿ ಮಾತನಾಡಿದ ಅವರು, ಪರಸ್ಪರ ಭಾಷಾ ಸಾಮರಸ್ಯ ಮೆರೆಯಬೇಕಾಗಿರುವ ಸಂದರ್ಭದಲ್ಲಿ ಭಾಷೆಯ ವಿಚಾರದಲ್ಲಿ ಪರಸ್ಪರ  ನಿಂದಿಸಿ ಹಲ್ಲೆಯಲ್ಲಿ ತೊಡಗಿರುವ ಬೆಳವಣಿಗೆ ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಲೋಕಾಯುಕ್ತದ ಬಗ್ಗೆ ಟೀಕೆ ಮಾಡಿರುವ ಕುಮಾರಸ್ವಾಮಿ ಮೊದಲು ತಮ್ಮ ಸಮಸ್ಯೆಗಳಿಂದ ಹೊರಬರಲಿ ಎಂದೂ ದಿನೇಶ್ ಗುಂಡೂರಾವ್ ಸಲಹೆ ನೀಡಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೀವ್ರವಾಗಿರುವ ಮರಳು ಅಭಾವ ನೀಗಿಸಲು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಂಬಂಧಿಸಿದ ಇಲಾಖೆಗಳ ಸಮನ್ವಯ ಸಭೆ ನಡೆಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನರಿಗೆ ಕಡಿಮೆ ದರದಲ್ಲಿ ಮರಳು ದೊರೆಯುವಂತೆ ಮಾಡಬೇಕು ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ಸ್ಯಾಂಡ್ ಬಜಾರ್ ಆಪ್ ವ್ಯವಸ್ಥೆ ಮತ್ತೆ ಜಾರಿಯಾಗಬೇಕು ಎಂದು ಸೂಚಿಸಿದ್ದಾರೆ.

<><*<><>*><>

ನಾಳೆ ದೇಶಾದ್ಯಂತ ಶಿವರಾತ್ರಿ ಸಂಭ್ರಮ ; ದೇವಾಲಯಗಳಲ್ಲಿ ವಿಶೇಷ ಪೂಜೆ ಪುನಸ್ಕಾರ ಹಮ್ಮಿಕೊಳ್ಳಲಾಗಿದೆ. ಶಿವಭಕ್ತರು ಇಂದಿನಿಂದಲೇ ಹಬ್ಬಕ್ಕೆ ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಮಹಾಶಿವರಾತ್ರಿ ಅಂಗವಾಗಿ ಧರ್ಮಸ್ಥಳದಲ್ಲಿ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿದ್ದು, ಭಕ್ತರು ಕಾಲ್ನಡಿಗೆಯಲ್ಲಿ ತೆರಳುತ್ತಿದ್ದಾರೆ. ಮೈಸೂರಿನ ನಂಜನಗೂಡು ಹಾಗೂ ಚಾಮರಾಜನಗರದ ಮಲೆ ಮಹದೇಶ್ವರ ಬೆಟ್ಟದಲ್ಲೂ ಶಿವರಾತ್ರಿ ಜಾಗರಣೆ ನಡೆಯಲಿದೆ. ಉತ್ತರಕನ್ನಡ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಗೋಕರ್ಣ ಮತ್ತು ಮುರುಡೇಶ್ವರದಲ್ಲಿ ನಾಳೆ ಅಹೋರಾತ್ರಿ ಜಾಗರಣೋತ್ಸವಕ್ಕೆ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಮಹಾಶಿವರಾತ್ರಿ ಹಬ್ಬದ ದಿನವಾದ ನಾಳೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಸುಪ್ರಸಿದ್ದ ನಂದಿಯ ಭೋಗನಂದೀಶ್ವರ ದೇವಾಲಯ ಹಾಗೂ ನಂದಿಬೆಟ್ಟದ ಯೋಗ ನಂದೀಶ್ವರ ದೇವಾಲಯದಲ್ಲಿ ವಿಶೇಷಪೂಜೆ, ನಡೆಯಲಿದೆ.  ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ ಕೈವಾರದ ಶ್ರೀ ಯೋಗಿ ನಾರಾಯಣ ಯತೀಂದ್ರರ ಮಠದಲ್ಲಿ ನಾಳೆ ಹರಿಕಥೆ ಹಮ್ಮಿಕೊಳ್ಳಲಾಗಿದೆ. ದೇವಾಲಯದಲ್ಲಿ ಮಹಾಶಿವಲಿಂಗ ದರ್ಶನವನ್ನು ಏರ್ಪಡಿಸಲಾಗಿದೆ.

<><*<><>*><>

ಇದೇ ೨೮ರಿಂದ ಮೂರು ದಿನಗಳ ಕಾಲ ಹಂಪಿ ಉತ್ಸವ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಧಿಕಾರಿ ಬಿ.ಎಲ್.ಶ್ರೀಹರಿ ಬಾಬು ತಿಳಿಸಿದ್ದಾರೆ. ಹಂಪಿ ಮತ್ತು ಹೊಸಪೇಟೆಯಲ್ಲಿ ಒಟ್ಟು ಐದುನೂರು ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ ಕೊಪ್ಪಳ ಚಿತ್ರದುರ್ಗ ಹಾವೇರಿ ಬಳ್ಳಾರಿ ರಾಯಚೂರು ಸೇರಿದಂತೆ ಇತರೆ ಜಿಲ್ಲೆಗಳಿಂದ ಹೆಚ್ಚುವರಿ ಪೊಲೀಸರನ್ನು ನಿಯೋಜಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳು ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ಸಲುವಾಗಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಇದೇ ೨೮ ರಂದು ಮಂಡ್ಯ ಜಿಲ್ಲೆಯಲ್ಲಿ ಅಹವಾಲು ಆಲಿಸಲಿದೆ. ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ನೋಂದಣಿಯಾಗಿರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಿ ವಿಲೇವಾರಿ ಮಾಡಲು ಆಯೋಗ ಕ್ರಮ ವಹಿಸಲಿದೆ. ದೂರುದಾರರು ಹಾಗೂ ಪ್ರತಿವಾದಿಗಳು ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ ಎಂದು ರಾಜ್ಯ ಮಾನವ ಹಕ್ಕುಗಳ ಆಯೋಗದ ಕಾರ್ಯದರ್ಶಿ ಎ. ದಿನೇಶ್ ಸಂಪತ್‌ರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಕಲ್ಮಾಲದಿಂದ ತಿಂಥಣಿ ಸೇತವೆವರೆಗೆ ರಾಜ್ಯ ಹೆದ್ದಾರಿಯ ಟೋಲ್‌ಗೇಟ್ ಅಳವಡಿಸಿದ್ದು ಸರಿಯಾದ ಕ್ರಮವಲ್ಲ ಎಂದು  ಸಂಸದ ಜಿ ಕುಮಾರ ನಾಯಕ ಅಭಿಪ್ರಾಯಪಟ್ಟಿದ್ದಾರೆ. ರಾಯಚೂರು ದೇವದುರ್ಗ ಮುಖ್ಯ ರಸ್ತೆಯಲ್ಲಿ ಇಂದು ಕರ್ನಾಟಕ ರಾಜ ರೈತ ಸಂಘ ನಡೆಸಿದ ಪ್ರತಿಭಟನೆ ಸ್ಥಳಕ್ಕೆ ಭೇಟಿ ನೀಡಿದ ಅವರು, ರೈತರ ಮನವಿ ಸ್ವೀಕರಿಸಿದರು. ಜನಸಾಮಾನ್ಯರು, ರೈತರು, ವ್ಯಾಪಾರಿಗಳು ದಿನನಿತ್ಯ ಓಡಾಡುವ ಈ ರಸ್ತೆಯಲ್ಲಿ ಟೋಲ್ ಗೇಟ್ ನಿರ್ಮಾಣ ಅತ್ಯಂತ ಅವೈಜ್ಞಾನಿಕ ಕ್ರಮ ಎಂದು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘಟನೆಯ ಅಧ್ಯಕ್ಷ ಚಾಮರಸ ಮಾಲಿ ಪಾಟೀಲ್ ಸೇರಿದಂತೆ  ಪದಾಧಿಕಾರಿಗಳು, ರೈತರು ಅನೇಕ ಸಂಘಟನೆ ಮುಖಂಡರು ಸೇರಿದಂತೆ ಹಲವರು ಹಾಜರಿದ್ದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು…

- ಯಾದಗಿರಿ ಜಿಲ್ಲೆಯ ಗುರುಮಠಕಲ್ ಮತಕ್ಷೇತ್ರದ ಚಕ್ರ ಗ್ರಾಮದಲ್ಲಿ ೬೦ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ನಾಡ ಕಚೇರಿ ಕಟ್ಟಡವನ್ನು ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ್ ಉದ್ಘಾಟಿಸಿದರು.
- ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ನಗರಸಭೆ ವ್ಯಾಪ್ತಿಯಲ್ಲಿ ಸುಮಾರು ೭ ಸಾವಿರದ ೬೦೦ ಬಿ-ಖಾತಾ ನೊಂದಣಿಯಾಗಬೇಕಿದ್ದು, ಐದಾರು ವಾರ್ಡ್ ಗಳಿಗೆ ಒಂದು ತಂಡವನ್ನು ರಚಿಸಿ ಅಗತ್ಯ ದಾಖಲೆಗಳನ್ನು ಪಡೆದು ಬಿ-ಖಾತೆ ಮಾಡಿಕೊಡುವಂತೆ ನಗರಸಭೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಶಿಡ್ಲಘಟ್ಟ ಶಾಸಕ ಬಿ.ಎನ್.ರವಿಕುಮಾರ್ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>